ಅದು ಎಪ್ಪತ್ತು ವರ್ಷಗಳ ಹಿಂದೆ ನರಕಕ್ಕೆ ಎಸೆಯಲಾದ ಒಂದು ಕಲ್ಲು. ಅದು ನರಕದೊಳಗೆ ಬೀಳುತ್ತಾ ಇದೀಗ ಅದರ ತಳಭಾಗವನ್ನು ತಲುಪಿದೆ

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: ಒಮ್ಮೆ ನಾನು ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಜೊತೆಯಲ್ಲಿದ್ದಾಗ ಇದ್ದಕ್ಕಿದ್ದಂತೆ ಒಂದು ಸದ್ದು ಕೇಳಿಸಿತು. ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ
ಮತ್ತು ಶಾಂತಿಯಿರಲಿ) ಕೇಳಿದರು: "ಇದೇನೆಂದು ನಿಮಗೆ ತಿಳಿದಿದೆಯೇ?" ನಾವು ಹೇಳಿದೆವು:
"ಅಲ್ಲಾಹು ಮತ್ತು ಅವನ ಸಂದೇಶವಾಹಕರೇ ಹೆಚ್ಚು ತಿಳಿದವರು." ಅವರು ಹೇಳಿದರು: "ಅದು ಎಪ್ಪತ್ತು ವರ್ಷಗಳ ಹಿಂದೆ ನರಕಕ್ಕೆ ಎಸೆಯಲಾದ ಒಂದು ಕಲ್ಲು. ಅದು ನರಕದೊಳಗೆ ಬೀಳುತ್ತಾ ಇದೀಗ ಅದರ ತಳಭಾಗವನ್ನು ತಲುಪಿದೆ."
[صحيح] [رواه مسلم]

ಒಮ್ಮೆ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಆಕಾಶಕಾಯವು ಕೆಳಗೆ ಬಿದ್ದಂತಹ ಒಂದು ಕಳವಳಕಾರಿ ಸದ್ದನ್ನು ಕೇಳಿದರು. ಅವರು ತಮ್ಮ ಬಳಿಯಿದ್ದ ಸಂಗಡಿಗರೊಡನೆ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ಆ ಸದ್ದಿನ ಬಗ್ಗೆ ಕೇಳಿದಾಗ, ಅವರು ಉತ್ತರಿಸಿದರು: "ಅಲ್ಲಾಹು ಮತ್ತು ಅವನ ಸಂದೇಶವಾಹಕರೇ ಹೆಚ್ಚು ಬಲ್ಲವರು." ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ನೀವು ಕೇಳಿದ ಈ ಸದ್ದು ಎಪ್ಪತ್ತು ವರ್ಷಗಳ ಹಿಂದೆ ನರಕದ ಮೇಲ್ಭಾಗದಿಂದ ಅದಕ್ಕೆ ಎಸೆಯಲಾದ ಒಂದು ಕಲ್ಲಾಗಿದೆ. ಅದು ನರಕದೊಳಗೆ ಬೀಳುತ್ತಾ, ಇದೀಗ ನೀವು ಅದರ ಸದ್ದು ಕೇಳುವಾಗ ನರಕದ ತಳಭಾಗವನ್ನು ತಲುಪಿದೆ."

http://sunnah.global/hadeeth/kn/show/3370